**CC No 43/2022**
**PW.9**

**<u>ಸಾಕ್ಷಿಗೆ ದಿನಾಂಕ 18.03.2024 ರಂದು ಪ್ರಮಾಣ ವಚನ ಭೋದಿಸಲಾಯಿತು.</u>**

**<u>ಮುಂದುವರೆದ ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ</u>**

ದಿಃ 16.11.2016 ರಲ್ಲಿ ಮದುವೆಯ ಮಾತುಕತೆ ಆಗಿರುತ್ತದೆ. ಆ ದಿನ ಯಾವುದೇ ಮಾತುಕತೆ ಆಗಿರಲಿಲ್ಲ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಗೆ ಒಡವೆ ಕೊಟ್ಟಿರುವುದನ್ನು ನಾನು ನೋಡಿರುವುದಿಲ್ಲ. ಆದರೆ ಕೊಡಬೇಕೆಂದು ಮಾತುಕತೆ ಆಗಿತ್ತು ಎಂದು ನುಡಿಯುತ್ತಾರೆ. ಆರೋಪಿ ಯಾವಾಗ ಗಲಾಟೆ ಮಾಡಿರುತ್ತಾರೆಂದು ದಿನಾಂಕ, ತಿಂಗಳು ಮತ್ತು ಸಮಯವನ್ನು ಹೇಳಲಾಗುವುದಿಲ್ಲ. ಆರೋಪಿ ಗಲಾಟೆ ಮಾಡಿರುವುದನ್ನು ನಾನು ನೋಡಿರುವುದಿಲ್ಲ. ಆರೋಪಿ ಬಂದು ಗಲಾಟೆ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ದಾಖಲೆಗಳಿಗೆ ಸಂಬಂಧಪಟ್ಟಂತೆ ಚಾಸಾ-1 ರವರು ಆರೋಪಿಯನ್ನು ಕೇಳಿದ್ದಕ್ಕೆ ಗಲಾಟೆ ಮಾಡಿರುತ್ತಾರೆ ಎಂದು ಹೇಳಿರುತ್ತೇನೆ. ಸದರಿ ಗಲಾಟೆಯನ್ನು ನಾನು ನೋಡಿರುವುದಿಲ್ಲ. ದೂರು ಕೊಡುವ ಸಮಯದಲ್ಲಿ ನಾನು ಚಾಸಾ-1 ರವರ ಜೊತೆಯಲ್ಲಿ ಹೋಗಿದ್ದೆ, ದೂರಿನಲ್ಲಿ ಬರೆದಿರುವ ಅಂಶಗಳು ಗೊತ್ತಿಲ್ಲ. ಯಾವ ದಿನಾಂಕ ದೂರು ಕೊಟ್ಟಿರುತ್ತಾರೆ ಎಂದು ಹೇಳಲಾಗುವುದಿಲ್ಲ. ನಾನು ಠಾಣೆಗೆ ಹೋಗಿರಲಿಲ್ಲ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದೂರನ್ನು ನೀಡುವ ಸಮಯದಲ್ಲಿ ಠಾಣೆಗೆ ಹೋಗಿರುವುದನ್ನು ಹೊರತುಪಡಿಸಿ ಬೇರೆ ಯಾವ ದಿನವೂ ಠಾಣೆಗೆ ಹೋಗಿರುವುದಿಲ್ಲ. ಸದರಿ ದಿನ ಚಾಸಾ-1 ರವರು ಯಾವ ದಾಖಲೆಗಳನ್ನು ಹಾಜರುಪಡಿಸಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನಿಪಿ-3 ರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಪಂಚನಾಮೆ ಜರುಗಿಸಲು ಲಿಖಿತವಾಗಿ ನೋಟೀಸ್ ಕೊಟ್ಟಿರುವುದಿಲ್ಲ. ಸದರಿ ದಿನ ನಾನು ಠಾಣೆಗೆ ಹೋಗಿರಲಿಲ್ಲ ಸಹಿ ಮಾಡಿರಲಿಲ್ಲ ಎಂದರೆ ಸರಿಯಲ್ಲ. ದಿಃ26.08.2021 ರಂದು ಠಾಣೆಗೆ ಹಾಜರಾಗಿ ಹೇಳಿಕೆ ಕೊಟ್ಟಿರುವುದಿಲ್ಲ. ದಿಃ 28.07.2021 ರಂದು ನಾನು ಠಾಣೆಗೆ ಹೋಗಿರುವುದಿಲ್ಲ. ಚಾಸಾ-1 ರವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ</u> ಇಲ್ಲ**

(ನನ್ನ ಉಕ್ತಲೇಖನ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

**ಓ ಹೇ ಕೇ ಸರಿ ಇದೆ**

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು,**
**ದೊಡ್ಡಬಳ್ಳಾಪುರ.**